83

# ಕರ್ನಾಟಕ ಸರ್ಕಾರ

**ವಿಷಯ:** ಶಾಶ್ವತ ಅಂಗವಿಕಲ/ಬುದ್ಧಿಮಾಂದ್ಯದಿಂದ ಬಳಲುತ್ತಿರುವ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ "ಶಿಶುಪಾಲನಾ ರಜೆ" ಮಂಜೂರು ಮಾಡಲು ಇರುವ ನಿರ್ಬಂಧವನ್ನು ಸಡಿಲಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ:29.06.2011.

**ಪ್ರಸ್ತಾವನೆ:-**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಸರ್ಕಾರಿ ನೌಕರರಿಗೆ ತಮ್ಮ ಅಂಗವಿಕಲ/ಬುದ್ಧಿಮಾಂದ್ಯ, ವಿಶೇಷ ಮಕ್ಕಳ ಪಾಲನೆಗಾಗಿ ಕೆಲವು ಷರತ್ತುಗಳೊಂದಿಗೆ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿರುತ್ತದೆ. ಸದರಿ ಆದೇಶದಲ್ಲಿನ ಕ್ರಮ ಸಂಖ್ಯೆ(ii) ರಲ್ಲಿ ಸದರಿ ಮಕ್ಕಳಿಗೆ 18ವರ್ಷ ಮೀರಿರಬಾರದು ಎಂಬ ಷರತ್ತನ್ನು ವಿಧಿಸಿದ್ದು, ಸದರಿ ಷರತ್ತನ್ನು ಕೈಬಿಡುವಂತೆ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಭಾರತ ಸರ್ಕಾರವು ವಿಶೇಷ ಮಕ್ಕಳನ್ನು ಹೊಂದಿರುವ ತಾಯಂದಿರ ಪ್ರಕರಣಗಳಿಗೆ ಮಾತ್ರ ಸೀಮಿತಗೊಳಿಸಿ ಗರಿಷ್ಠ 730 ದಿನಗಳಿಗೆ ಮೀರದಿರುವ ನಿಬಂಧನೆಯೊಂದಿಗೆ 18ವರ್ಷಗಳ ಮಿತಿಯನ್ನು ತೆಗೆದು ಹಾಕಿ ಅವಕಾಶ ಕಲ್ಪಿಸಿದ್ದು, ಈ ಅಂಶಗಳನ್ನು ಅವಲೋಕಿಸಿ ರಾಜ್ಯ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 3 (ಇ) ಸೇನಿಸೇ 2019, ಬೆಂಗಳೂರು, ದಿನಾಂಕ:17.10.2019**

ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ:29.06.2011ರಲ್ಲಿನ ಇತರ ಷರತ್ತುಗಳು ಯಥಾವತ್ತಾಗಿ ಮುಂದುವರೆಯುವ ನಿಬಂಧನೆಗೊಳಪಟ್ಟು ಕ್ರಮ ಸಂಖ್ಯೆ(ii) ರಲ್ಲಿ ವಿಧಿಸಿರುವ ಷರತ್ತಾದ " ಮತ್ತು ಆ ಮಕ್ಕಳಿಗೆ 18ವರ್ಷ ಮೀರಿರಬಾರದು" ಎಂಬ ಷರತ್ತನ್ನು ಕೈಬಿಟ್ಟು ಆದೇಶಿಸಿದೆ.

ಈ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗೆ ಅವಶ್ಯಕ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುವುದು.

1126 Leela 22/10/19
ದಿನಾಂಕ 22/10/2019

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B.S.
(ಬಿ.ಎಸ್.ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

2/11

website

5. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
7. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
8. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
14. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
23. ವಾರ್ಡವತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ **www.finance.kar.nic.in** ವೀಕ್ಷಿಸಿ (ಕ್ರಮ ಸಂಖ್ಯೆ: 6 ರಿಂದ 14 ರವರೆಗೆ ಪತ್ರದ ಮೂಲಕ)